ಕರ್ನಾಟಕ ಸರ್ಕಾರ
ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ

ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರ ರಸ್ತೆ
ಇ-ಮೇಲ್: ceo-ckbpur-ka@nic.in

ದೂರವಾಣಿ: 08156277011
ಫ್ಯಾಕ್ಸ್ : 08156-277011

ಇ-ಆಫೀಸ್ಕಡತ ಸಂಖ್ಯೆ: CKBZP-11025/1/2024

ದಿನಾಂಕ: 31.05.2024

ರವರಿಗೆ,

1. ಉಪ ಅರಣ್ಯ ಸಂರಕ್ಷಣಾಧಿಕಾರಿ,
   ಸಾಮಾಜಿಕ ಅರಣ್ಯ,
   ಚಿಕ್ಕಬಳ್ಳಾಪುರ.
2. ಕಾರ್ಯನಿರ್ವಾಹಕ ಅಧಿಕಾರಿ,
   ತಾಲ್ಲೂಕು ಪಂಚಾಯತಿ,
   ಬಾಗೇಪಲ್ಲಿ, ಚಿಕ್ಕಬಳ್ಳಾಪುರ, ಚಿಂತಾಮಣಿ
   ಗೌರಿಬಿದನೂರು ಗುಡಿಬಂಡೆ ಮತ್ತು ಶಿಡ್ಲಘಟ್ಟ

ಮಾನ್ಯರೇ,

**ವಿಷಯ:** ಹವಾಮಾನ ಬದಲಾವಣೆ ಕ್ರಿಯಾ ಯೋಜನೆ ಅನುಸಾರವಾಗಿ ರಾಜ್ಯದಲ್ಲಿ ಲಭ್ಯವಿರುವ ಗೋಮಾಳ ಭೂಮಿಯನ್ನು ಅಭಿವೃದ್ಧಿ ಪಡಿಸಲು ಅಗತ್ಯ ಕ್ರಮ ಕೈಗೊಳ್ಳುವ ಬಗೆ.

**ಉಲ್ಲೇಖ:** ಆಯುಕ್ತರು, ಪಶುಪಾಲನಾ ಮತ್ತು ಪಶು ವೈದ್ಯ ಸೇವಾ ಇಲಾಖೆ, ಪಶುಪಾಲನಾ ಭವನ, ಬಳ್ಳಾರಿ ರಸ್ತೆ, ಹೆಬ್ಬಾಳ, ಬೆಂಗಳೂರು ರವರ ಪತ್ರ ಸಂಖ್ಯೆ: ಅಪಸಂ/ಮೇವು-ವಿವ-18-2021-22 ದಿನಾಂಕ: 29.04.2024.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ: 01.03.2024 ರಂದು ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು ರವರ ಅಧ್ಯಕ್ಷತೆಯಲ್ಲಿ ನಡೆದ ಸಭಾ ನಡವಳಿಯಂತೆ ರಾಜ್ಯದಲ್ಲಿ ಲಭ್ಯವಿರುವ ಗೋಮಾಳ ಭೂಮಿಯನ್ನು ಪ್ರಮಾಣೀಕರಿಸುವುದು ಮತ್ತು ಪ್ರದೇಶವಾರು ಮೇವು ಕಿಟ್‌ಗಳನ್ನು ಪೂರೈಸುವ ಯೋಜನೆಯನ್ನು ಸಲ್ಲಿಸಲು ತಿಳಿಸಿರುತ್ತಾರೆ. ಅದರಂತೆ ಮಾನ್ಯ ಆಯುಕ್ತರು, ಪಶುಪಾಲನಾ ಮತ್ತು ಪಶು ವೈದ್ಯ ಸೇವಾ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ: 18.03.2024 ರಂದು ನಡೆದ ಸಭಾ ನಡವಳಿಯನ್ವಯ ಗೋಮಾಳ ಭೂಮಿಯು ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಅಧೀನದಲ್ಲಿ ಇರುವುದಿಲ್ಲವೆಂದು ಹಾಗೂ ಸದರಿ ಭೂಮಿಯಲ್ಲಿ ಮೇವಿನ ಕಿಟ್‌ಗಳನ್ನು ಸರಬರಾಜು ಮಾಡಿ ಮೇವನ್ನು ಬೆಳೆಸಿ ಅಭಿವೃದ್ಧಿಪಡಿಸುವುದು ಕಷ್ಟಸಾಧ್ಯವಾಗಿರುತ್ತದೆ ಎಂದು ಅಭಿಪ್ರಾಯಿಸಲಾಯಿತು.

ಸರ್ಕಾರದ ಆದೇಶ ಪತ್ರ ಸಂಖ್ಯೆ: ಇ-ಪಸಂಮೀ/52/ಪಪಾಯೋ/2023 ದಿನಾಂಕ: 30.10.2023 ರ ಆದೇಶದನ್ವಯ ರಾಜ್ಯದಲ್ಲಿ ಜಾನುವಾರುಗಳಿಗೆ ಮೇವಿನ ಕೊರತೆ ಉಂಟಾಗದಂತೆ ಮೇವು ಉತ್ಪಾದನೆ ಹೆಚ್ಚಿಸಲು ಕ್ರಮ ವಹಿಸುವಂತೆ ಈಗಾಗಲೇ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮೇವು ಅಭಿವೃದ್ಧಿ ಕಾರ್ಯಪಡೆ ಸಮಿತಿಯನ್ನು ರಚಿಸಿ ಆದೇಶಿಸಲಾಗಿರುತ್ತದೆ, ಹಾಗೂ ಈ ಸಮಿತಿಯ ಸಹ ಅಧ್ಯಕ್ಷರಾಗಿ ಜಿಲ್ಲಾ ಪಂಚಾಯಿತಿಯ ಸಿ.ಇ.ಒಗಳನ್ನು ನೇಮಿಸಿ ಆದೇಶಿಸಲಾಗಿರುತ್ತದೆ. ಜಿಲ್ಲಾ ವ್ಯಾಪ್ತಿಯಲ್ಲಿ ಲಭ್ಯವಿರುವ ಸದರಿ ಗೋಮಾಳ ಭೂಮಿಯಲ್ಲಿ MGNREGA ಯೋಜನೆ ಅಡಿ ಅರಣ್ಯ ಇಲಾಖೆಯಿಂದ ಮೇವಿನ ಮರಗಳನ್ನು ನೆಡುವ ಮೂಲಕ ಮೇವು ಅಭಿವೃದ್ಧಿಪಡಿಸಬಹುದಾಗಿದ್ದು, ಈ ಕುರಿತು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಮತ್ತು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಉಲ್ಲೇಖಿತ ಪತ್ರದಲ್ಲಿ ತಿಳಿಸಲಾಗಿರುತ್ತದೆ.

>>2

ಮುಂದುವರೆದು, ಉಲ್ಲೇಖಿತ ಪತ್ರದಲ್ಲಿ ತಿಳಿಸಿರುವಂತೆ ಜಿಲ್ಲಾ ವ್ಯಾಪ್ತಿಯಲ್ಲಿ ಲಭ್ಯವಿರುವ ಗೋಮಾಳ ಭೂಮಿಯಲ್ಲಿ MGNREGA ಯೋಜನೆ ಅಡಿ ಅರಣ್ಯ ಇಲಾಖೆಯಿಂದ ಮೇವಿನ ಮರಗಳನ್ನು ನೆಡುವ ಮೂಲಕ ಮೇವು ಅಭಿವೃದ್ಧಿಪಡಿಸುವ ಬಗ್ಗೆ, ಸರ್ಕಾರದ ಆದೇಶಗಳ ಅನುಸರಿಸಿ ನಿಯಮಾನುಸಾರ ಅಗತ್ಯ ಕ್ರಮವಹಿಸಲು ಸೂಚಿಸಿದೆ.

**(ಕ.ಟಿ.ಮಾ.ಮು.ಕಾ.ನಿ ರವರಿಂದ ಅನುಮೋದಿಸಲ್ಪಟ್ಟಿದೆ)**

ಉಪ ಕಾರ್ಯದರ್ಶಿ
ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ

ಪ್ರತಿಯನ್ನು:-

1. ಆಯುಕ್ತರು, ಪಶುಪಾಲನಾ ಮತ್ತು ಪಶು ವೈದ್ಯ ಸೇವಾ ಇಲಾಖೆ, ಪಶುಪಾಲನಾ ಭವನ, ಬಳ್ಳಾರಿ ರಸ್ತೆ, ಹೆಬ್ಬಾಳ, ಬೆಂಗಳೂರು ರವರ ಮಾಹಿತಿಗಾಗಿ.
2. ಜಿಲ್ಲೆಯ ಎಲ್ಲಾ ತಾಲ್ಲೂಕಿನ ಪಂಚಾಯತಿ ಅಬಿವೃದ್ಧಿ ಅಧಿಕಾರಿಗಳಿಗೆ (ಸಂಬಂಧಿಸಿದ ಕಾ.ನಿ.ಅ ಮೂಲಕ) ಅಗತ್ಯ ಕ್ರಮಕ್ಕಾಗಿ.
3. ಕಛೇರಿ ಪ್ರತಿ.